# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:-** ವಿದ್ಯಾರ್ಥಿ ಪ್ಯಾರಾಮೆಡಿಕಲ್ ಕಾಲೇಜು, ಕುಶಾಲನಗರ, ಕೊಡಗು ಜಿಲ್ಲೆ ಇವರ ವಿದ್ಯಾರ್ಥಿಗಳಿಗೆ ಕ್ಲಿನಿಕಲ್ ಸೌಲಭ್ಯ ಒದಗಿಸುವ ಬಗ್ಗೆ.

**ಓದಲಾಗಿದೆ:-** 1. ಸರ್ಕಾರದ ಆದೇಶ ಸಂಖ್ಯೆ: ಆಕುಕ 143 ಆರ್.ಜಿ.ಯು 2011, ದಿ:11.01. 2012
2. ಆಯುಕ್ತರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು, ಇವರ ಪತ್ರ ಸಂಖ್ಯೆ: ಎಂಡಿಪಿ(ಕ್ಲಿ)/36/2019-20, ದಿನಾಂಕ: 15.07.2019

*****

**ಪ್ರಸ್ತಾವನೆ:-**

ಮೇಲೆ ಓದಲಾದ ಕ್ರಮಾಂಕ(1)ರ ಸರ್ಕಾರದ ಆದೇಶದಲ್ಲಿ ಸದರಿ ಸಂಸ್ಥೆಯವರಿಗೆ ಪ್ಯಾರಾಮೆಡಿಕಲ್ ಕಾಲೇಜು ಪ್ರಾರಂಭಿಸಲು ಸರ್ಕಾರವು ಮಂಜೂರಾತಿ ನೀಡಿ ಆದೇಶಿಸಿದೆ.

ಮೇಲೆ ಓದಲಾದ ಕ್ರಮ ಸಂಖ್ಯೆ (2)ರ ಪತ್ರದಲ್ಲಿ ಆಯುಕ್ತರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು, ಬೆಂಗಳೂರು, ಇವರು ವಿದ್ಯಾರ್ಥಿ ಪ್ಯಾರಾಮೆಡಿಕಲ್ ಕಾಲೇಜು, ಕುಶಾಲನಗರ, ಕೊಡಗು ಜಿಲ್ಲೆ ಇವರ ಡಿ.ಎಂ.ಎಲ್.ಟಿ ಮತ್ತು ಡಿ.ಓ.ಟಿ ಪ್ಯಾರಾಮೆಡಿಕಲ್ ಕೋರ್ಸಗಳ ವಿದ್ಯಾರ್ಥಿಗಳಿಗೆ ಸಾರ್ವಜನಿಕ ಆಸ್ಪತ್ರೆ ಪಿರಿಯಾಪಟ್ಟಣ, ಮೈಸೂರು ಜಿಲ್ಲೆ ಇಲ್ಲಿ ಕ್ಲಿನಿಕಲ್ ಸೌಲಭ್ಯ ಒದಗಿಸುವ ಬಗ್ಗೆ ಶಿಫಾರಸ್ಸು ಮಾಡಿ ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಿರುತ್ತಾರೆ.

ಸರ್ಕಾರವು ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ ಈ ಕೆಳಕಂಡಂತೆ ಆದೇಶಿಸಿದೆ:

**ಸರ್ಕಾರದ ಆದೇಶ ಸಂಖ್ಯೆ: ಆಕುಕ 31 ಸಿಜಿಇ 2019**
**ಬೆಂಗಳೂರು, ದಿನಾಂಕ: 31-10-2019**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನಲೆಯಲ್ಲಿ, ವಿದ್ಯಾರ್ಥಿ ಪ್ಯಾರಾಮೆಡಿಕಲ್ ಕಾಲೇಜು, ಕುಶಾಲನಗರ, ಕೊಡಗು ಜಿಲ್ಲೆ ಇವರ ಡಿ.ಎಂ.ಎಲ್.ಟಿ ಮತ್ತು ಡಿ.ಓ.ಟಿ ಕೋರ್ಸಗಳ ವಿದ್ಯಾರ್ಥಿಗಳಿಗೆ ಸಾರ್ವಜನಿಕ ಆಸ್ಪತ್ರೆ, ಪಿರಿಯಾಪಟ್ಟಣ, ಮೈಸೂರು ಜಿಲ್ಲೆ ಇಲ್ಲಿ ಈ ಕೆಳಕಂಡ ಷರತ್ತಿಗೊಳಪಟ್ಟು ಕ್ಲಿನಿಕಲ್ ಸೌಲಭ್ಯ ಒದಗಿಸಲು ಸರ್ಕಾರವು ಮಂಜೂರಾತಿ ನೀಡಿದೆ.

1. ಪ್ರಸ್ತುತ ನೀಡಲಾಗಿರುವ ಕ್ಲಿನಿಕಲ್ ಸೌಲಭ್ಯದ ಅವಧಿಯು ಮೂರು ವರ್ಷಗಳಿಗೆ ಮಾತ್ರ ಸೀಮಿತವಾಗಿರುತ್ತದೆ.
2. ಪ್ರಸ್ತುತ ವರ್ಷದಲ್ಲಿ ನರ್ಸಿಂಗ್ ವಿದ್ಯಾರ್ಥಿಗಳ ಸಂಖ್ಯೆಗೆ ಅನುಗುಣವಾಗಿ ಸರ್ಕಾರದ ಆದೇಶ ಸಂಖ್ಯೆ: ಆಕುಕ 103 ಕೆವಿಎಂ 2011, ದಿನಾಂಕ:03.06.2011ರಂತೆ ನಿಗದಿತ ಶುಲ್ಕದ ಹಣವನ್ನು ಪೂರ್ಣ ಮತ್ತು ಮುಂಗಡವಾಗಿಯೇ ಪಾವತಿಸಿಕೊಂಡ ನಂತರವೇ ಸಂಸ್ಥೆಯಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ಕ್ಲಿನಿಕಲ್ ಸೌಲಭ್ಯ ನೀಡತಕ್ಕದ್ದು. ತಪ್ಪಿದಲ್ಲಿ ಸಂಬಂಧಿಸಿದ ವೈದ್ಯಾಧಿಕಾರಿಗಳು ಹೊಣೆಗಾರರಾಗಿರುತ್ತಾರೆ.
3. ಈ ಸಂಬಂಧ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಿಂದ ಹೊರಡಿಸಲಾಗುವ ಆದೇಶದನ್ವಯ ಪರಿಷ್ಕೃತ ಕ್ಲಿನಿಕಲ್ ಸೌಲಭ್ಯ ಶುಲ್ಕದ ದರಗಳ ವ್ಯತ್ಯಾಸದ ಮೊತ್ತವನ್ನು ಪಾವತಿಸತಕ್ಕದ್ದು.
4. ಕ್ಲಿನಿಕಲ್ ಸೌಲಭ್ಯ ನೀಡಿದ ಅವಧಿಯಲ್ಲಿ ವಿದ್ಯಾರ್ಥಿಗಳಿಂದ ಸರ್ಕಾರಿ ಆಸ್ಪತ್ರೆಗೆ ನಷ್ಟ ಉಂಟಾದಲ್ಲಿ ಈ ನಷ್ಟವನ್ನು ಸದರಿ ಸಂಸ್ಥೆಯೇ ಭರಿಸತಕ್ಕದ್ದು.
5. ಸದರಿ ಆದೇಶವನ್ನು ಹೊರಡಿಸಿದ ಮೂರು ತಿಂಗಳೊಳಗಾಗಿ ಕ್ಲಿನಿಕಲ್ ಸೌಲಭ್ಯವನ್ನು ಉಪಯೋಗಿಸಿಕೊಳ್ಳದೇ ಹೋದಲ್ಲಿ ಈ ಆದೇಶವು ತಂತಾನೆ ರದ್ದಾಗುವುದೆಂದು ಭಾವಿಸತಕ್ಕದ್ದು.
6. ಸರ್ಕಾರವು ಕಾಲಕಾಲಕ್ಕೆ ನಿಗದಿಪಡಿಸತಕ್ಕಂತಹ ಸರ್ಕಾರಿ ಕೋಟದ ಸೀಟುಗಳನ್ನು ನೀಡತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

**(ಎಂ. ಕುಮಾರಸ್ವಾಮಿ)**
ಸರ್ಕಾರದ ಅಧೀನ ಕಾರ್ಯದರ್ಶಿ,
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ.
(ಆರೋಗ್ಯ 1&2)

**ಇವರಿಗೆ:**

1. ಆಯುಕ್ತರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು, ಆನಂದರಾವ್ ವೃತ್ತ, ಬೆಂಗಳೂರು.
2. ನಿರ್ದೇಶಕರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು, ಆನಂದರಾವ್ ವೃತ್ತ, ಬೆಂಗಳೂರು.
3. ಮುಖ್ಯ ವೈದ್ಯಾಧಿಕಾರಿಗಳು, ಸಾರ್ವಜನಿಕ ಆಸ್ಪತ್ರೆ, ಪಿರಿಯಾಪಟ್ಟಣ, ಮೈಸೂರು ಜಿಲ್ಲೆ.
4. ಜಿಲ್ಲಾ ಆರೋಗ್ಯ & ಕುಟುಂಬ ಕಲ್ಯಾಣ ಅಧಿಕಾರಿ, ಮೈಸೂರು ಜಿಲ್ಲೆ.
5. ಪ್ರಾಂಶುಪಾಲರು, ವಿದ್ಯಾರ್ಥಿ ಪ್ಯಾರಾಮೆಡಿಕಲ್ ಕಾಲೇಜು, ಬಿ.ಎಂ.ರಸ್ತೆ, ಕುಶಾಲನಗರ, ಕೊಡಗು ಜಿಲ್ಲೆ - 571234
6. ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.